ಕರ್ನಾಟಕ ಸರ್ಕಾರ

## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-03

E-Mail:adpisvsection@gmail.com ದೂರವಾಣಿ ಸಂಖ್ಯೆ:080-23360073

ಸಂಖ್ಯೆ:ಎಸ್5/ಗ.ಯಂ.ಶಿ.ಪ.ಆ-22/ತಾ.ಕಾ.ಸೂ/ಅಧಿ/ಸು/ಜ್ಞಾ/04/2022-23 ದಿನಾಂಕ:11/07/2022

## ಸುತ್ತೋಲೆ

ವಿಷಯ: 2022 ರ ಆಗಸ್ಟ್ ಮಾಹೆಯಲ್ಲಿ ನಡೆಯಲಿರುವ ಗಣಕಯಂತ್ರ ಶಿಕ್ಷಣ ಪರೀಕ್ಷೆಗೆ ಹಾಜರಾಗುತ್ತಿರುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಬಗ್ಗೆ.

******

2022ರ ಆಗಸ್ಟ್ ಮಾಹೆಯಲ್ಲಿ ನಡೆಯುವ ಗಣಕಯಂತ್ರ ಶಿಕ್ಷಣ ಪರೀಕ್ಷೆಗಳನ್ನು **ದಿನಾಂಕ:01/08/2022** ರಿಂದ **08/08/2022** ರವರೆಗೆ ನಡೆಸಲಾಗುತ್ತಿದೆ. ಸದರಿ ಪರೀಕ್ಷೆಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣ sslc.karnataka.gov.in ನಲ್ಲಿ ಲಭ್ಯವಿರುವಂತೆ ಕ್ರಮ ಕೈಗೊಳ್ಳಲಾಗಿದೆ. ಮಂಡಳಿಯ ಜಲತಾಣದಲ್ಲಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಿ ಹಾಗೂ ಅಗತ್ಯವಿದ್ದಲ್ಲಿ ವಿದ್ಯಾರ್ಥಿಗಳ ವೈಯಕ್ತಿಕ ವಿವರಗಳ ತಿದ್ದುಪಡಿಗಳನ್ನು **ದಿನಾಂಕ:21/07/2022** ರೊಳಗೆ ಮಂಡಳಿಯನ್ನು ಸಂಪರ್ಕಿಸಿ ಅಪ್‌ಡೇಟ್ ಮಾಡಲು ಸೂಚಿಸಿದೆ.

ಪ್ರವೇಶ ಪತ್ರಗಳಲ್ಲಿ ಯಾವುದೇ ತಪ್ಪುಗಳಿಲ್ಲದಿರುವ ಬಗ್ಗೆ ಪರಿಶೀಲಿಸುವುದು. ಒಂದು ವೇಳೆ ಏನಾದರೂ ತಪ್ಪುಗಳು ಕಂಡು ಬಂದಲ್ಲಿ ಕೂಡಲೇ ಶಾಖಾಧಿಕಾರಿಗಳು, ವಾಣಿಜ್ಯ ಶಾಖೆ ರವರ ಗಮನಕ್ಕೆ ತಂದು ಸರಿಪಡಿಸಿಕೊಳ್ಳುವುದು.

### ಪ್ರವೇಶಪತ್ರದಲ್ಲಿ ಈ ಕೆಳಕಂಡ ಅಂಶಗಳನ್ನು ಪರಿಶೀಲಿಸುವುದು

1. ಸಂಸ್ಥೆಯ ಪ್ರಾಂಶುಪಾಲರು OTHER EXAMS PORTALನ INSTITUTE LOGIN ನಲ್ಲಿ ತಮ್ಮ ಸಂಸ್ಥೆಯ USER NAME ಹಾಗೂ PASS WORD ಬಳಸಿ ಎಲ್ಲಾ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪರಿಶೀಲಿಸಬೇಕು.
2. AUTOFETCH ಆಗಿರುವ ಮಾಹಿತಿಯನ್ನು ಅಂದರೆ ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮದಿನಾಂಕ, ಲಿಂಗ ಇವುಗಳನ್ನು ಹೊರತು ಪಡಿಸಿ, ಉಳಿದ ಮಾಹಿತಿಯನ್ನು ಅಂದರೆ ಅಭ್ಯರ್ಥಿಯ ದೈಹಿಕ ಸ್ಥಿತಿ, ಭಾವಚಿತ್ರ, ಸಹಿ ಇವುಗಳನ್ನು ಮಾತ್ರ ತಿದ್ದುಪಡಿ ಮಾಡಲು ಪ್ರಸ್ತಾವನೆ ಸಲ್ಲಿಸಬಹುದಾಗಿದೆ.
3. ಸಂಸ್ಥೆಯಿಂದ ಕಳುಹಿಸಿದ ಅಭ್ಯರ್ಥಿಗಳ ಸಂಖ್ಯೆಗೆ ಅನುಸಾರ ನಿಮ್ಮ ಸಂಸ್ಥೆಯಲ್ಲಿ ಸ್ವೀಕೃತವಾದ ಪ್ರವೇಶ ಪತ್ರಗಳ ಸಂಖ್ಯೆಗಳು ತಾಳೆಯಾಗುತ್ತಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು. ಒಂದು ವೇಳೆ ತಾಳೆ ಹೊಂದದಿದ್ದಲ್ಲಿ ಯಾವ ಅಭ್ಯರ್ಥಿಯ ಪ್ರವೇಶ ಪತ್ರ ಬಂದಿಲ್ಲವೆಂಬುದನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮಕ್ಕಾಗಿ ಸಮರ್ಥನೆಯೊಂದಿಗೆ/ದಾಖಲೆಗಳನ್ನು ಕಳುಹಿಸಿಕೊಡುವುದು.
4. ಸಂಸ್ಥೆಯ ಸಂಕೇತ ಹಾಗೂ ಸಂಸ್ಥೆಯ ಹೆಸರಿನಲ್ಲಿ ಏನಾದರೂ ವ್ಯತ್ಯಾಸ ಕಂಡು ಬಂದಲ್ಲಿ ಸಮರ್ಥನೆಯೊಂದಿಗೆ ಮಂಡಳಿಗೆ ಕಳುಹಿಸಿಕೊಡುವುದು.
5. ಸಂಸ್ಥೆಯಿಂದ ಅಪ್‌ಲೋಡ್ ಮಾಡಿರುವಂತೆ ಅಭ್ಯರ್ಥಿಗಳ ಮಾಹಿತಿಗಳು, ಭಾವಚಿತ್ರ ಮತ್ತು ಸಹಿಯನ್ನು ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿ ಮತ್ತೊಂದು ಭಾವಚಿತ್ರ ಮತ್ತು ಸಹಿಯೊಂದಿಗೆ ಅದಲು ಬದಲಾಗಿದ್ದಲ್ಲಿ ಸರಿಯಾದ ಅಭ್ಯರ್ಥಿಗಳ ಭಾವಚಿತ್ರ ಮತ್ತು ಸಹಿಯನ್ನು ಸಂಸ್ಥೆಯ ಪ್ರಾಂಶುಪಾಲರು ದೃಢೀಕರಿಸಿ Scanಪ್ರತಿಯನ್ನು (ಭಾವಚಿತ್ರ-60-80 KB, ಸಹಿ-20-50 KB, ಇರುವಂತೆ JPEG FORMATನಲ್ಲಿ) adpisvsection@gmail.com ಗೆ Mail ಮಾಡಿ ಸರಿಪಡಿಸಿಕೊಳ್ಳುವುದು. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮಯಾದಿ ಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ಅಭ್ಯರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ಅಭ್ಯರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಸಂಸ್ಥೆಯ ಪ್ರಾಂಶುಪಾಲರೇ ಜವಾಬ್ದಾರರಾಗಿರುತ್ತಾರೆ ಎಂದು ಸ್ಪಷ್ಟ ಪಡಿಸಿದೆ.
6. ಯಾವುದೇ ಅಭ್ಯರ್ಥಿಯ ಭಾವಚಿತ್ರ ಬದಲಾವಣೆಗೆ ಸಂಬಂಧಿಸಿದಂತೆ, ಪರೀಕ್ಷೆಗೆ ಮುಂಚೆ ಮಾಡಲಾದ ಬದಲಾವಣೆಗಳನ್ನು ಮಾತ್ರ ಮಂಡಳಿಯು ಪರಿಗಣಿಸುತ್ತದೆ. ಕೇಂದ್ರ ನಾಮಪಟ್ಟಿಯಲ್ಲಿ ಯಾವುದೇ

ಬದಲಾವಣೆಗಳನ್ನು ಮಾಡದೆ ಇದ್ದಲ್ಲಿ ನಾಮಪಟ್ಟಿಯಲ್ಲಿರುವ ಭಾವಚಿತ್ರದ ಅಭ್ಯರ್ಥಿಯೇ ನೈಜ ಅಭ್ಯರ್ಥಿ ಎಂದು ಪರಿಗಣಿಸಲಾಗುವುದು. ಪರೀಕ್ಷಾ ನಂತರದಲ್ಲಿ ಬರುವ ಅಭ್ಯರ್ಥಿಗಳ ಭಾವಚಿತ್ರ ಬದಲಾವಣೆ ಕುರಿತ ಯಾವುದೇ ಮನವಿಗಳನ್ನು ಮಂಡಳಿ ಪುರಸ್ಕರಿಸುವುದಿಲ್ಲ. ಇದಕ್ಕೆ ಸಂಬಂಧಿಸಿದ ಸಂಸ್ಥೆಯ ಪ್ರಾಂಶುಪಾಲರು ಹಾಗೂ ಪರೀಕ್ಷಾ ಕೇಂದ್ರದ ಅಧೀಕ್ಷಕರುಗಳೇ ನೇರ ಜವಾಬ್ದಾರರಾಗಿರುತ್ತಾರೆ. ಈ ರೀತಿ ಆದಲ್ಲಿ ಬದಲಿ ಅಭ್ಯರ್ಥಿ ಪರೀಕ್ಷೆ ಬರೆಯಲು ಸಹಕರಿಸಿ ಪರೀಕ್ಷಾ ಅವ್ಯವಹಾರದಲ್ಲಿ ಭಾಗಿಯಾಗಿರುತ್ತೀರೆಂದು ಪರಿಗಣಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಮತ್ತು ಶಾಲಾ ಪ್ರಾಂಶುಪಾಲರ ಮೇಲೆ ಕೆ.ಸಿ.ಎಸ್.ಆರ್ (ಸಿ.ಸಿ.ಎ) ನಿಯಮ-1957 ಮತ್ತು 1983 ರ ಕರ್ನಾಟಕ ಶಿಕ್ಷಣ ಕಾಯ್ದೆ ಹಾಗೂ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ-1966 ರನ್ವಯ ಕ್ರಮ ಜರುಗಿಸಲಾಗುವುದು.

7. ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ಪಾಲಿಸಲು ಅಭ್ಯರ್ಥಿಗಳಿಗೆ ಅಗತ್ಯವಾದ ಮಾಹಿತಿಯನ್ನು ನೀಡುವುದು.
8. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿ ಪರೀಕ್ಷೆಗೆ ಹಾಜರಾಗುವ ವಿಷಯದ ಮುಂದೆ ನಮೂದಿಸಿರುವ ವಿಷಯ ಸಂಕೇತ ಹಾಗೂ ಬ್ಯಾಚ್ ಬಗ್ಗೆ ಖಚಿತ ಪಡಿಸಿಕೊಳ್ಳುವುದು. ತಂಡ ಬದಲಾವಣೆಗೆ ಅವಕಾಶವಿರುವುದಿಲ್ಲ. ಈ ಸಂಬಂಧ ಸಂಸ್ಥೆಯ ಪ್ರಾಂಶುಪಾಲರು ಅಭ್ಯರ್ಥಿಗಳಿಗೆ ಮಾಹಿತಿ ನೀಡುವುದು.
9. ಪರೀಕ್ಷಾ ದಿನಾಂಕ ಪ್ರಾರಂಭವಾದ ದಿನಾಂಕದಂದು ಬೆಳಿಗ್ಗೆ 10:00 ಗಂಟೆಯ ನಂತರ ಪ್ರವೇಶ ಪತ್ರಗಳನ್ನು DownLoad ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.

ಮೇಲ್ಕಂಡ ಅಂಶಗಳಂತೆ ನಿಮ್ಮ ಸಂಸ್ಥೆಯ ಎಲ್ಲಾ ಅಭ್ಯರ್ಥಿಗಳ ಪ್ರವೇಶಪತ್ರಗಳನ್ನು ಆದ್ಯತೆ ಮೇರೆಗೆ ಕಡ್ಡಾಯವಾಗಿ ಪರಿಶೀಲಿಸಿಕೊಳ್ಳುವುದು.

**ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಮತ್ತು ಶಾಖಾಧಿಕಾರಿಗಳು ವಾಣಿಜ್ಯ ವಿಭಾಗ, 4ನೇ ಮಹಡಿ, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003, ಮೊಬೈಲ್ ಸಂಖ್ಯೆ: 7892273533 ಮಂಡಳಿಯ ಸಹಾಯವಾಣಿ ಸಂಖ್ಯೆ: 080-23360073 ಹಾಗೂ ಇ-ಮೇಲ್ ವಿಳಾಸ: adpisvsection@gmail.com ಸಂಪರ್ಕಿಸುವುದು.**

(ಮಾರುತಿ ಎಂ.ಆರ್)
ನಿರ್ದೇಶಕರು,
(ಇತರೆ ಪರೀಕ್ಷೆಗಳು)

<u>ಇವರಿಗೆ:</u>
1. ರಾಜ್ಯದ ಎಲ್ಲಾ ವಾಣಿಜ್ಯ ಮತ್ತು ಗಣಕಯಂತ್ರ ಶಿಕ್ಷಣ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ನೋಡಲ್ ಅಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಗಣಕಶಾಖೆ ಇವರಿಗೆ ಈ ಸುತ್ತೋಲೆಯನ್ನು ಅಂತರ್ ಜಾಲದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.